# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(1ಬಿ)ಪಿಆರ್/ 63 /23-24

ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 13. 3. 24.

**ಕಛೇರಿ ಆದೇಶ**

ವಿಷಯ: ಶ್ರೀ ಕೆ. ವಿ. ರಮೇಶ್, ಭೂಮಾಪಕರು ಇವರನ್ನು ಪಾಲಿಕೆಯ ಸೇವೆಯಿಂದ ಬಿಡುಗಡೆ ಮಾಡುವ ಬಗ್ಗೆ.

ಉಲ್ಲೇಖ: 1) ವಿಶೇಷ ಆಯುಕ್ತರು (ಕಂದಾಯ) ರವರ ವರದಿ ದಿನಾಂಕ: 05-03-2024
2) ಸಂಖ್ಯೆ: ಬಿ12(6)ಪಿಆರ್/56/23-24, ದಿನಾಂಕ: 05-07-2023ರ ಸುತ್ತೋಲೆ

-----------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಶ್ರೀ ಕೆ. ವಿ. ರಮೇಶ್, ಭೂಮಾಪಕರು, ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆಯಿಂದ ಎರವಲು ಸೇವೆಯ ಮೇಲೆ ಪಾಲಿಕೆಗೆ ನಿಯೋಜನೆಗೊಂಡು, ಹಾಲಿ ಉಪ ಆಯುಕ್ತರು (ಭೂಸ್ವಾಧೀನ / ಟಿ.ಡಿ.ಆರ್) ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಇವರ ನಿಯೋಜನಾ ಅವಧಿಯು ಮುಕ್ತಾಯಗೊಂಡಿದ್ದು, ಇವರ ಸೇವೆ ತೃಪ್ತಿಕರವಾಗಿರುವುದಿಲ್ಲವಾದ್ದರಿಂದ, ಇವರ ಸೇವೆಯು ಪಾಲಿಕೆಗೆ ಅಗತ್ಯವಿಲ್ಲವೆಂದು ಪರಿಗಣಿಸಿ, ಸದರಿಯವರನ್ನು ಈ ತಕ್ಷಣದಿಂದ ಜಾರಿಗೆ ಬರುವಂತೆ ಈ ಕೆಳಕಂಡ ಷರತ್ತಿಗೊಳಪಡಿಸಿ, ದಿ: 13-03-2024ರ ಅಪರಾಹ್ನದಿಂದ ಅನ್ವಯವಾಗುವಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸೇವೆಯಿಂದ ಬಿಡುಗಡೆ ಮಾಡಿ, ಮಾತೃ ಇಲಾಖೆಗೆ ಹಿಂದಿರುಗಿಸಿ ಆದೇಶಿಸಿದೆ.

**ಷರತ್ತುಗಳು:-**

1. ಸದರಿ ಅಧಿಕಾರಿಯವರು ನಗರ ಪಾಲಿಕೆಯ ಸೇವಾ ಅವಧಿಯಲ್ಲಿ ನಗರ ಪಾಲಿಕೆಗೆ ಯಾವುದೇ ಆರ್ಥಿಕ ಬಾಕಿಯನ್ನು ಉಳಿಸಿಕೊಂಡಿದ್ದಲ್ಲಿ ಸದರಿಯವರಿಂದ ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ.
2. ಸದರಿ ಅಧಿಕಾರಿಯವರ ವಿರುದ್ಧ ಇಲಾಖಾ ವಿಚಾರಣೆ ಬಾಕಿ ಇದ್ದಲ್ಲಿ ನಿಯಮಾನುಸಾರ ಕ್ರಮಜರುಗಿಸುವ ಷರತ್ತಿಗೊಳಪಡಿಸಿದೆ.
3. ಪಾಲಿಕೆಯ ಹಿಂದಿನ ವರ್ಷಗಳ ಆಡಿಟ್ ವರದಿಗಳಲ್ಲಿ ಯಾವುದೇ ಆರ್ಥಿಕ ಬಾಕಿಯನ್ನು ಸದರಿಯವರಿಂದ ವಸೂಲಾತಿ ಮಾಡಲು ಸೂಚಿಸಿದಲ್ಲಿ, ಅಂತಹ ಮೊತ್ತವನ್ನು ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ ಹಾಗೂ ಆಕ್ಷೇಪಣೆಗಳಿದ್ದಲ್ಲಿ ಅವುಗಳಿಗೆ ಸಮರ್ಪಕ ಉತ್ತರ ನೀಡುವ ಷರತ್ತು ವಿಧಿಸಿದೆ.
4. ಸದರಿ ಅಧಿಕಾರಿಯವರು ನಗರ ಪಾಲಿಕೆಯ ವಸತಿಗೃಹದಲ್ಲಿ ವಾಸಿಸುತ್ತಿದ್ದಲ್ಲಿ ಕೂಡಲೇ ತೆರವುಗೊಳಿಸುವ ಷರತ್ತಿಗೊಳಪಡಿಸಿದೆ.
5. ವಾಕಿ ಟಾಕಿ, ಮೊಬೈಲ್ ಫೋನ್, ಸಿಮ್‌ಕಾರ್ಡ್, ಹೆಲ್ಮಾರ್ಡ್, ಗುರುತಿನ ಚೀಟಿ (Identity card) ಹಾಗೂ ಲ್ಯಾಪ್ ಟಾಪ್‌ಗಳನ್ನು ಪಾಲಿಕೆಯಿಂದ ಪಡೆದಿದ್ದಲ್ಲಿ ಇವುಗಳನ್ನು ಪಾಲಿಕೆಗೆ ಹಿಂದಿರುಗಿಸುವ ಷರತ್ತಿಗೊಳಪಡಿಸಿದೆ.

ಮೇಲ್ಕಂಡ ಆದೇಶದನ್ವಯ ಹಾಗೂ ಮಾನ್ಯ ಮುಖ್ಯ ಆಯುಕ್ತರು ರವರ ಉಲ್ಲೇಖ-(2)ರ ಸುತ್ತೋಲೆಯನ್ವಯ ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳುವುದು.

ಮಾನ್ಯ ಮುಖ್ಯ ಆಯುಕ್ತರು ರವರ
ಆದೇಶದ ಮೇರೆಗೆ)

(ಸಹಿ) 13/3
ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಪ್ರತಿಯನ್ನು :**

: ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ರವರಿಗೆ ಕಳುಹಿಸಿದೆ.
: ಆಯುಕ್ತರು, ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆ, ವಿ.ವಿ.ಗೋಪುರ, ಬೆಂಗಳೂರು ರವರಿಗೆ ಕಳುಹಿಸಿದೆ.
: ಮಾನ್ಯ ವಿಶೇಷ ಆಯುಕ್ತರು ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ವಿಶೇಷ ಆಯುಕ್ತರು ವಿಶೇಷ ಆಯುಕ್ತರು (ಕಂದಾಯ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಉಪ ಆಯುಕ್ತರು (ಭೂಸ್ವಾಧೀನ / ಟಿ.ಡಿ.ಆರ್) ರವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
: ಉಪ ಮುಖ್ಯ ಮಾಹಿತಿ ಅಧಿಕಾರಿ, ಬಿ.ಬಿ.ಎಂ.ಪಿ ರವರಿಗೆ ಕಳುಹಿಸುತ್ತಾ, ಸದರಿಯವರು ಮೊಬೈಲ್ ಫೋನ್, ಮತ್ತು ಸಿಮ್ ಕಾರ್ಡ್ ಅನ್ನು ಪಾಲಿಕೆಗೆ ಹಿಂದಿರುಗಿಸಿರುವ ಬಗ್ಗೆ ದೃಢೀಕರಿಸಿಕೊಳ್ಳುವುದು.
: ಮು.ಲೆ.ಅ / ಮು.ಲೆ.ಪ ರವರಿಗೆ ರವರಿಗೆ /ಉ.ನಿ (ಹಣಕಾಸು-ಕೇಂದ್ರ) ರವರಿಗೆ ಕಳುಹಿಸಿದೆ.
: ಸಂಬಂಧಪಟ್ಟ ಅಧಿಕಾರಿಯವರಿಗೆ / ಕಛೇರಿ ಪ್ರತಿ.

SDA 13/03/24

1559
13/03/2024